Computer

| ಕರ್ನಾಟಕ ವಿಧಾನ ಪರಿಷತ್ತು | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 359(433) |
| ಸದಸ್ಯರ ಹೆಸರು | **ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)** |
| ಉತ್ತರಿಸಬೇಕಾದ ದಿನಾಂಕ | 16.02.2023 |
| ಉತ್ತರಿಸುವವರು | ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಸುಮಾರು ವರ್ಷಗಳಿಂದ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಮೇಲೆ ಕೆಲಸ ನಿರ್ವಹಿಸಿ ನಂತರ ಸದರಿ ನೌಕರರಿಗೆ ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಅಧಿಸೂಚಿಸಿ ಖಾಯಮಾತಿ ಮಾಡಿದ್ದು, ಆ ಲಿಪಿಕ ಸಹಾಯಕ ನೌಕರರಿಗೆ ಖಾಯಂ ನೌಕರರಿಗೆ ನೀಡುವ ಸೌಲಭ್ಯ ವಿಸ್ತರಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಪ್ರಸ್ತುತ ಅಂತಹ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಆ) | ಸದರಿ ನೌಕರರ ಕುರಿತು ಸರ್ಕಾರ ಅವರು ಕಾರ್ಯನಿರ್ವಹಿಸಿದ ಬಗ್ಗೆ ಅವರಿಗೆ ಸೂಕ್ತ ಬೇರೆ ವ್ಯವಸ್ಥೆ ಮಾಡಿಕೊಡುವುದೇ; ಇದಕ್ಕೆ ಎಷ್ಟು ಕಾಲಾವಕಾಶ ಬೇಕಾಗುತ್ತದೆ; (ವಿವರ ನೀಡುವುದು) | |
| ಇ) | ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಅಧಿಸೂಚಿಸಲ್ಪಟ್ಟ ಅರಣ್ಯ ಇಲಾಖೆಯ ಕಛೇರಿಯಲ್ಲಿ ಗುಮಾಸ್ತರು ನಿರ್ವಹಿಸುವ ಕೆಲಸ ಸರಳವಾಗಿ ನಿರ್ವಹಿಸಿಕೊಂಡು ಹೋಗುತ್ತಿದ್ದು, ತುಂಬಾ ಅನುಭವ ಹೊಂದಿರುವ ಲಿಪಿಕ ಸಹಾಯಕರಿಗೆ ಈಗಾಗಲೇ ಅರಣ್ಯ ಇಲಾಖೆಯಲ್ಲಿ ವಲಯ/ವಿಭಾಗ ಕಚೇರಿಗಳಲ್ಲಿ ಹಲವಾರು ವರ್ಷಗಳಿಂದ ದ್ವಿತೀಯ ದರ್ಜೆ ಸಹಾಯಕರ ಹುದ್ದೆ ಖಾಲಿ ಇರುವುದರಿಂದ ಸದರಿ ಹುದ್ದೆಗೆ ಸಮನಾಂತರವಾಗಿ ಕೆಲಸ ನಿರ್ವಹಿಸುತ್ತಿರುವ ಅಧಿಸೂಚಿತ ಲಿಪಿಕ ಸಹಾಯಕರಿಗೆ ಇಲಾಖೆಯ ಹಿತದೃಷ್ಟಿಯಿಂದ ದ್ವಿತೀಯ ದರ್ಜೆ ಸಹಾಯಕ ಹುದ್ದೆಗೆ ನೇಮಕ ಮಾಡುವ ಕುರಿತು ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು) | ದ್ವಿತೀಯ ದರ್ಜೆ ಸಹಾಯಕರ ವೃಂದದ ಖಾಲಿಯಿರುವ ಹುದ್ದೆಗೆ ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಅಧಿಸೂಚಿಸಲ್ಪಟ್ಟ ಲಿಪಿಕ ಸಹಾಯಕರನ್ನು ನೇಮಕ ಮಾಡಲು ಅವಕಾಶವಿರುವುದಿಲ್ಲ. |
| ಈ) | ಅಧಿಸೂಚಿತ ಲಿಪಿಕ ಸಹಾಯಕರಿಗೆ ನೀಡುವ ವೇತನ ಹಾಗೂ ದ್ವಿತೀಯ ದರ್ಜೆ ಸಹಾಯಕರಿಗೆ ನೀಡುವ ಸೌಲಭ್ಯದ ಬಗ್ಗೆ ಪ್ರತಿಯೊಬ್ಬ ನೌಕರರಿಂದ ಸರ್ಕಾರಕ್ಕೆ ಆರ್ಥಿಕ ಹೊರೆಯಾಗುತ್ತದೆಯೇ; (ವಿವರ ನೀಡುವುದು) | ಮೇಲೆ ತಿಳಿಸಿರುವಂತೆ ನಿಯಮದಲ್ಲಿ ಅವಕಾಶ ಇಲ್ಲದಿರುವುದರಿಂದ ಆರ್ಥಿಕ ಹೊರೆಯ ಪ್ರಶ್ನೆ ಉದ್ಭವಿಸುವುದಿಲ್ಲ. |

ಕಡತ ಸಂಖ್ಯೆ : ಎಫ್‌ಇಇ 27 ಎಫ್‌ಎನ್‌ಜಿ 2023

**(ಬಸವರಾಜ ಬೊಮ್ಮಾಯಿ)**
ಮುಖ್ಯಮಂತ್ರಿ